ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 204/2017

(ಫ್ರಾಸಾ-8 ಚಾಸಾ-13)
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 18.12.2025

| | | |
|---|---|---|
| ಸಾಕ್ಷಿದಾರರ ಹೆಸರು | - | ಬಾಲಾಜಿ ಎಂ |
| ತಂದೆಯ ಹೆಸರು | - | ಮುನಿವೆಂಕಟಪ್ಪ |
| ವಯಸ್ಸು | - | 44 ವರ್ಷ, |
| ಉದ್ಯೋಗ | - | ಪಿಐ, ಎಸ್ ಇ ಆರ್ ಬಿ, ಬೆಂಗಳೂರು |
| ವಾಸ | - | ಯಲಹಂಕ, ಬೆಂಗಳೂರು |

<u>ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ</u>

ನಾನು ಏಪ್ರಿಲ್ 2016 ರಿಂದ ಏಪ್ರಿಲ್ 2017 ರವರೆಗೆ ರಾಜಾನಕುಂಟೆ ಪೋಲಿಸ್ ಠಾಣೆಯಲ್ಲಿ ಪೋಲಿಸ್ ಸಬ್ ಇನ್ಸಪೆಕ್ಟರ್ ಆಗಿ ಕಾರ್ಯನಿರ್ವಹಿಸುತ್ತಿದ್ದೆನು. ದಿನಾಂಕ 25.07.2016 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಮಧ್ಯಾಹ್ನ 02.00 ಘಂಟೆ ಸಮಯದಲ್ಲಿ ಠಾಣಾ ಹೆಚ್ ಸಿ 710 ರಾಮಾಂಜಿನೆಪ್ಪ ಇವರು ಠಾಣೆಗೆ ಹಾಜರಾಗಿ ಬೆಂಗಳೂರು ನಗರದ ರಾಮಕೃಷ್ಣ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಚಾಸಾ-1 ರವರು ವೈದ್ಯರ ಸಮಕ್ಷಮ ನೀಡಿದ ಹೇಳಿಕೆಯ ದೂರು ಪಡೆದು ನನ್ನ ಮುಂದೆ ಠಾಣೆಯಲ್ಲಿ ಹಾಜರುಪಡಿಸಿದ ಮೇರೆಗೆ ಸದರಿ ಹೇಳಿಕೆಯ ದೂರನ್ನು ಪಡೆದು ಠಾಣಾ ಮೊಕದ್ದಮೆ ಸಂಖ್ಯೆ 154/2016 ರಲ್ಲಿ ಪ್ರಥಮ ವರ್ತಮಾನ ವರದಿಯನ್ನು ನೊಂದಾಯಿಸಿರುತ್ತೇನೆ.

2. ದೂರು ಮತ್ತು ಪ್ರ.ವ.ವರದಿಯನ್ನು ಠಾಣಾ ಸಿಬ್ಬಂದಿಯ ಮುಖಾಂತರ ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿದ್ದು ಪ್ರತಿಗಳನ್ನು ಹಿರಿಯ ಅಧಿಕಾರಿಗೆ ಕಳುಹಿಸಿಕೊಟ್ಟಿರುತ್ತೇನೆ. ಅದೇ ದಿನ ಈ ಪ್ರಕರಣವು ಎಸ್ ಸಿ ಎಸ್ ಟಿ ಪ್ರಕರಣವಾದ್ದರಿಂದ

ಎಸ್ಪಿ ರವರ ಆದೇಶದ ಮೇರೆಗೆ ಪ್ರಕರಣದ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-14 ರವರಿಗೆ ಹಸ್ತಾಂತರಿಸಿರುತ್ತೇನೆ. ಸಾಕ್ಷಿ ದೂರು ಮತ್ತು ತಮ್ಮ ಸಹಿ ನೋಡಿ ಗುರುತಿಸಿದ್ದು ದೂರು ಈಗಾಗಲೇ ನಿಪಿ-1 ಎಂದು ಗುರ್ತಿಸಲಾಗಿದ್ದು, ನಿಪಿ-1 ದೂರಿನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ನಿಪಿ-1(ಬಿ) ಎಂದು ಗುರ್ತಿಸಲಾಯಿತು. ಪ್ರ.ವ.ವರದಿಯನ್ನು ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಪ್ರ.ವ.ವರದಿಯನ್ನು ನಿಪಿ-9 ಎಂದು ಮತ್ತು ಅದರಲ್ಲಿರುವ ಸಾಕ್ಷಿದಾರರ ಸಹಿಯನ್ನು ನಿಪಿ-9(ಎ) ಎಂದು ಗುರ್ತಿಸಲಾಯಿತು.

**<u>ಪಾಟೀ ಸವಾಲುಃ 1 ರಿಂದ 3 ಮತ್ತು 5 ನೇ ಆರೋಪಿತರ ಪರ ಶ್ರೀಮತಿ ಎಸ್ ಬಿ ವಕೀಲರಿಂದಃ</u>**

3. ದೂರು ಯಾರ ಹಸ್ತಾಕ್ಷದರಲ್ಲಿದೆ ಎಂದು ನನಗೆ ಹೇಳಲು ಬರುವುದಿಲ್ಲ. ದೂರಿನಲ್ಲಿ ವಿಳಂಬಕ್ಕೆ ಕಾರಣವನ್ನು ನಮೂದಿಸಿರುವುದಿಲ್ಲ. ಸಾಕ್ಷಿ ಮುಂದುವರಿದು ಚಾಸಾ-1 ಇವರು ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆಯುತ್ತಿದ್ದರು ಎಂದು ಹೇಳುತ್ತಾರೆ. 5 ನೇ ಆರೋಪಿಯ ತಾಯಿಯವರು ಇದೇ ಘಟನೆಗೆ ಸಂಬಂಧಪಟ್ಟಂತೆ ಚಾಸಾ-1 ರವರ ವಿರುದ್ದ ದೂರು ನೀಡಲು ನಮ್ಮ ಠಾಣೆಗೆ ಬಂದಾಗ ನಾನು ದೂರು ಪಡೆದಿಲ್ಲ ಎಂದರೆ ಸರಿಯಲ್ಲ. ಇದೇ ಆರೋಪಿತರ ವಿರುದ್ದ ನಮ್ಮ ಠಾಣೆಯಲ್ಲಿ ಕ್ರೈಂ ನಂ.153/2016 ರಲ್ಲಿ ದೂರು ದಾಖಲಾಗಿರುತ್ತದೆ ಎಂದರೆ ಸರಿ. ಸಾಕ್ಷಿ ಮುಂದುವರಿದು ನಾನು ಸದರಿ ಪ್ರಕರಣವನ್ನು ದಾಖಲು ಮಾಡಿಲ್ಲ ಎಂದು ಹೇಳುತ್ತಾರೆ. ಚಾಸಾ-1 ಇವರು ನೀಡಿದ ಸುಳ್ಳು ದೂರು ಪಡೆದು ನಾನು ಸರಿಯಾಗಿ ವಿಚಾರಣೆ ಮಾಡದೇ ಆರೋಪಿತರ ವಿರುದ್ದ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ 4 ನೇ ಆರೋಪಿ ಪರ ಶ್ರೀ ಬಿ ಬಿ ಎಂ ವಕೀಲರಿಂದಃ</u>**

4. 4 ನೇ ಆರೋಪಿಯು ಕೃತ್ಯ ನಡೆದ ಸ್ಥಳದಲ್ಲಿ ಇರದೇ ಇದ್ದರೂ ಸಹ ಆತನ ವಿರುದ್ದ

ಸಲ್ಲಿಸಲಾದ ಸುಳ್ಳು ದೂರನ್ನು ಪಡೆದು ಉದ್ದೇಶಪೂರ್ವಕವಾಗಿ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಹೇಳಿಕೆಯ ದೂರು ಸ್ವೀಕರಿಸಿದ ನಂತರ ನಾನು ಆಸ್ಪತ್ರೆಗೆ ಹೋಗಿ ಚಾಸಾ-1 ರವರು ಆಸ್ಪತ್ರೆಯಲ್ಲಿ ದಾಖಲಾದ ಬಗ್ಗೆ ಪರಿಶೀಲಿಸಿರುವುದಿಲ್ಲ.

(1 ರಿಂದ 3 ಮತ್ತು 5 ನೇ ಆರೋಪಿತರ ಪರ ವಕೀಲರು ಮಾಡಿದ ಪಾಟೀ ಸವಾಲನ್ನು ಉಳಿದ ಪಾಟೀ ಸವಾಲಾಗಿ ಅಳವಡಿಸಿಕೊಳ್ಳುವುದಾಗಿ ನಿವೇದಿಸಿರುತ್ತಾರೆ)

**<u>ಮರುವಿಚಾರಣೆಃ ಇಲ್ಲ</u>**

(ಸಾಕ್ಷಿ ಹೇಳಿದಂತೆ ಹೇಳಿಕೆಯನ್ನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಡೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು